ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	: 144 (1127)
ಸದಸ್ಯರ ಹೆಸರು	: ಡಾ: ಚಂದ್ರಶೇಖರ್ ಬಿ ಪಾಟೀಲ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	: 07.03.2022
ಉತ್ತರಿಸಬೇಕಾದ ಸಚಿವರು	: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕಲ್ಯಾಣ ಕರ್ನಾಟಕ ಭಾಗದ ಖಾಸಗಿ ಕನ್ನಡ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕೆಂಬ ಬೇಡಿಕೆಯು ಸರ್ಕಾರದ ಮುಂದೆ ಇದೆಯೇ;	ಕಲ್ಯಾಣ ಕರ್ನಾಟಕವೂ ಒಳಗೊಂಡಂತೆ ಸಮಗ್ರ ಕರ್ನಾಟಕದ ಖಾಸಗಿ ಕನ್ನಡ ಶಾಲಾ-ಕಾಲೇಜುಗಳನ್ನು ದಿನಾಂಕ; 01.06.1987 ರಿಂದ 1994-95ನೇ ಅವಧಿಯಲ್ಲಿ, ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸಿ ವಿಚ್ಛಿನ್ನತೆ ಇಲ್ಲದೇ ಸತತವಾಗಿ ನಡೆದು ಕೊಂಡು ಬಂದ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಕ್ರಮವಹಿಸಲಾಗಿದೆ. 1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, ಸದರಿ ಶಾಲಾ
ಆ)	ಹಾಗಿದ್ದಲ್ಲಿ, ಸರ್ಕಾರವು ಇಲ್ಲಿಯವರೆಗೆ ಬೇಡಿಕೆಗೆ ಸ್ಪಂದಿಸದೇ ಇರುವುದಕ್ಕೆ ಕಾರಣವೇನು;	
ಇ)	ಶಾಲೆಗಳಿಗೆ ಅನುದಾನ ನೀಡಲಾಗುವುದು ಯಾವಾಗ?	

		ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995 ರಿಂದ 2019 ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳೆಷ್ಟು? ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು / ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ತೀರ್ಮಾನಿಸಲಾಯಿತು. ಅದರಂತೆ, ಎಲ್ಲಾ ಮೂರು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಮಾಹಿತಿಯನ್ನು ಪಡೆಯಲು ಕ್ರಮವಹಿಸಲಾಗಿರುತ್ತದೆ.

ಇಪಿ 63 ಪಿಎಂಸಿ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.